ಸರಬರಾಜು ಕಂಪನಿಗಳು ನಗರ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನ ಸುಧಾರಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ

1) ಹೊಸ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆ

2) ಹಾಲಿ ಇರುವ ವಿದ್ಯುತ್ ಉವಕೇಂದ್ರಗಳ ಬಲವರ್ಧನೆ

3) ವಿತರಣಾ ವ್ಯವಸ್ಥೆಯ ಬಲಪಡಿಸುವಿಕೆ

4) ವಿದ್ಯುತ್ ಪ್ರಸರಣಾ ಮಾರ್ಗಗಳ ಬಲವಡಿಸುವಿಕೆ ಮತ್ತು ಹೊಸ ವಿದ್ಯುತ್ ಪ್ರಸರಣಾ ಮಾರ್ಗಗಳ ನಿರ್ಮಾಣ

5) ವಿತರಣಾ ವ್ಯವಸ್ಥೆಯಲ್ಲಿ ಹೆಚ್ಚುವರಿ ವಿತರಣಾ ಟ್ರಾನ್ಸ್ ಫಾರ್ಮರ್ ಗಳ ಅಳವಡಿಕೆ

ವಿದ್ಯುತ್ ಕೊರತೆ ರಾಜ್ಯ ವ್ಯಾಪ್ತಿ ವಿಷಯವಾಗಿರುವುದರಿಂದ, ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೆಚ್ಚಳಗೊಳಿಸುವುದು ವಿದ್ಯುತ್ ಕೊರತೆಯ ನಿವಾರಣೆಗೆ ಪ್ರಮುಖ ಪರಿಹಾರವಾಗಿದೆ ಆದುದರಿಂದ ಮುಂದಿನ 3 ರಿಂದ 4 ವರ್ಷಗಳ ಅವಧಿಯಲ್ಲಿ ಸುಮಾರು 3000 ಮೆಗಾವಾಟ್‌ನಷ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚುವರಿಯಾಗಿ ವಿದ್ಯುತ್ ವ್ಯವಸ್ಥೆಗೆ ಸೇರ್ಪಡೆಗೊಳಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದ್ದು, ಇದು ಸಾಕಾರಗೊಂಡಲ್ಲಿ ನಗರ ಪ್ರದೇಶಗಳು ಸೇರಿದಂತೆ ರಾಜ್ಯದಲ್ಲಿ ವಿದ್ಯುತ್ ಕೊರತೆ ಕಡಿಮೆಯಾಗುವ ಆಶಾಭಾವನೆಯನ್ನು ಹೊಂದಲಾಗಿದೆ

445 (345) **ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ)** ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇವಲ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿ ಹಾಗೂ ಗೌರಿಬಿದನೂರು ತಾಲ್ಲೂಕು ಗುಂಡ್ಲು ಕೊತ್ತೂರಿನ ಬಳಿ ನೂತನ ವಿದ್ಯುತ್ ಸಬ್‌ಸ್ಟೇಷನ್ ಗಳನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಮತ್ತು ಆ) ಬಾಗೇವಲ್ಲಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿಯ ಸಮೀಪದಲ್ಲಿರುವ ಪೆರೆಸಂದ್ರ

ಮತ್ತು ನಾದಲಿಗಳಲ್ಲಿ 66/11 ಕೆ ವಿ ವಿದ್ಯುತ್ ಉಪ ಕೇಂದ್ರಗಳು ಈಗಾಗಲೇ ಕಾರ್ಯನಿರ್ವಹಿಸುತ್ತಿದೆ ಗೌರಿಬಿದನೂರು ತಾಲ್ಲೂಕಿನ ಗುಂಡ್ಲು ಕೊತ್ತೂರಿನ ಬಳಿ ನೂತನ 66/11 ಕೆ ವಿ ವಿದ್ಯುತ್ ನಬ್ ಸ್ಟೇಷನ್ನನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಕಾಮಗಾರಿ ಗುತ್ತಿಗೆಯನ್ನು ಗುತ್ತಿಗೆದಾರರಿಗೆ ದಿನಾಂಕ 8 12 2006 ರಂದು, ವಹಿಸಲಾಗಿದ್ದು ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ ಕಾಮಗಾರಿಯು ಸೆಪ್ಟೆಂಬರ್ 2007ರ ಅಂತ್ಯಕ್ಕೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ

ಸೋಮೇನಹಳ್ಳಿಯಲ್ಲಿ ವಿದ್ಯುತ್ ಉಪ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾಪ ಸದ್ಯಕ್ಕೆ ಇರುವುದಿಲ್ಲ

446 (346) **ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ)** ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ ಡಿ ಎಂ ನಂಜುಂಡಪ್ಪ ವರದಿಯನ್ವಯ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ರಸ್ತೆಗಳ ಅಭಿವೃದ್ಧಿಗಾಗಿ ನಬಾರ್ಡ್ ಯೋಜನೆಯಡಿ ವಿಶೇಷ ಅನುದಾನ ನೀಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೆ,

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಡಾ ಡಿ ಎಂ ನಂಜುಂಡಪ್ಪ ಸಮಿತಿಯ ಅಂತಿಮ ವರದಿಯನ್ನು ಜೂನ್–2202 ರಲ್ಲಿ ಪಡೆಯಲಾಗಿದೆ ಈ ವರದಿಯಲ್ಲಿ ಅತಿ ಹಿಂದುಳಿದ ತಾಲ್ಲೂಕುಗಳು ಎಂದು ಗುರುತಿಸಲಾಗಿರುವ 39 ತಾಲ್ಲೂಕುಗಳಲ್ಲಿ 2003–04 2004–05 ಮತ್ತು 2005–06ನೇ ಸಾಲುಗಳಲ್ಲಿ 286 ರಸ್ತೆ ಮತ್ತು ಸೇತುವೆ ಕಾಮಗಾರಿಗಳನ್ನು 187 24 ಕೋಟಿ ರೂ ಮೊತ್ತದಲ್ಲಿ ನಬಾರ್ಡ್‌ನಿಂದ ಅನುಮೋದನೆ ಪಡೆದು ಕೈಗೊಳ್ಳಲಾಗಿದೆ ಇದಲ್ಲದೆ 2006–07ನೇ ಸಾಲಿನಲ್ಲಿ 107 ರಸ್ತೆ ಮತ್ತು ಸೇತುವೆ ಕಾಮಗಾರಿಗಳನ್ನು 72 60 ಕೋಟಿ ರೂ ಮೊತ್ತದಲ್ಲಿ ಕೈಗೊಳ್ಳಲು ಪ್ರಸ್ತಾವಿನಲಾಗಿದೆ

ಆ) ಮೇಲೆ ತಿಳಿಸಿರುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ

447 (151) **ಶ್ರೀ ಸುನೀಲ್ ಕುಮಾರ್ ವಿ (ಕಾರ್ಕಳ)** ಮಾನ್ಯ ಸಹಕಾರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?